ದಿನಾಂಕಃ 26.03.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ :**

ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ, ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.

ಪ್ರತಿವಾದಿಯು ಬರೆದುಕೊಟ್ಟ ಪ್ರಾಮಿಸರಿ ನೋಟನ್ನು ಈಗ ನೋಡುತ್ತಿದ್ದು ಅದನ್ನು **ನಿಪಿ-1** ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿರುವ ಪ್ರತಿವಾದಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು **ನಿಪಿ-1(ಎ)** ಎಂದು ಗುರುತಿಸಲಾಯಿತು.

ನಿಪಿ-1ಕ್ಕೆ ಸಾಕ್ಷಿದಾರರಾಗಿ ಜಗದೀಶ್ ಮತ್ತು ಭಾಸ್ಕರ್ ರವರು ಸಹಿ ಮಾಡಿದ್ದು ಸದರಿರವರ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು **ನಿಪಿ-1(ಬಿ)** ಮತ್ತು **ನಿಪಿ-1(ಸಿ)** ಎಂದು ಗುರುತಿಸಲಾಯಿತು. ಸದರಿ ಪತ್ರವನ್ನು ಪತ್ರಬರಹಗಾರರಾದ ಗೋಪಾಲ್ ರವರು ಬರೆದಿದ್ದು ಅವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು **ನಿಪಿ-1(ಡಿ)** ಎಂದು ಗುರುತಿಸಲಾಯಿತು.

ನಿಪಿ-1ರಲ್ಲಿ ಹಣ ಸಂದ ರಶೀದಿ ಇದ್ದು ಅದರಲ್ಲಿಯೂ ಸಹ ಮೇಲೆ ಹೇಳಿರುವವರು ಸಹಿ ಮಾಡಿರುತ್ತಾರೆ.

ಆದ್ದರಿಂದ, ದಾವಾವನ್ನು ಡಿಕ್ರಿ ಮಾಡಬೇಕೆಂದು ಪ್ರಾರ್ಥನೆ.

***ಪ್ರತಿವಾದಿ ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.***

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**